# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 1065 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಶರಣಗೌಡ ಬಯ್ಯಾಪುರ<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 14/12/2023 |
| ಉತ್ತರಿಸುವ ಸಚಿವರು | : | ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಜಿಲ್ಲೆಯ ಲಿಂಗಸಗೂರು ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಐತಿಹಾಸಿಕ ಮುದಗಲ್ ಪಟ್ಟಣ ಹಾಗೂ ಜಲದುರ್ಗ ಐತಿಹಾಸಿಕ ಕೋಟೆಗಳು ಶಿಥಿಲಾವಸ್ಥೆಗೆ ತಲುಪಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಈ ಕೋಟೆಗಳ ಜೀರ್ಣೋದ್ಧಾರ ಕಾಮಗಾರಿಗಳನ್ನು ಕೈಗೊಳ್ಳುವುದು ಅವಶ್ಯಕವಿರುವುದರ ಕುರಿತು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರವು ಕೈಗೊಂಡಿರುವ ಕ್ರಮವೇನು; | ಬಂದಿದೆ.<br><br>2013-14ನೇ ಸಾಲಿನ 13ನೇ ಹಣಕಾಸಿನ ಯೋಜನೆಯಡಿ ರಾಯಚೂರು ಜಿಲ್ಲೆಯ ಲಿಂಗಸಗೂರು ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಐತಿಹಾಸಿಕ ಮುದಗಲ್ ಕೋಟೆಯ ಸಂರಕ್ಷಣಾ ಕಾಮಗಾರಿಯನ್ನು ರೂ.50.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲಾಗಿದ್ದು, ಕೋಟೆ ಗೋಡೆಯ ಸಂರಕ್ಷಣಾ ಕಾಮಗಾರಿ ಹಾಗೂ ಕಾಂಕ್ರಿಟ್ ಚೈನ್ಲಿಂಕ್ ಫೆನ್ಸಿಂಗ್ ಕಾಮಗಾರಿಗಳ ಕೆಲಸ ಪೂರ್ಣಗೊಂಡಿದೆ.<br><br>ಜಲದುರ್ಗ ಐತಿಹಾಸಿಕ ಕೋಟೆಯ ಸಂರಕ್ಷಣೆ/ ಜೀರ್ಣೋದ್ಧಾರಕ್ಕೆ ಪ್ರಸ್ತಾವನೆ ಸ್ವೀಕೃತಗೊಂಡಲ್ಲಿ, ವಿಸ್ತೃತ ಯೋಜನಾ ವರದಿಯೊಂದಿಗೆ ಅನುದಾನದ ಲಭ್ಯತೆಗೆ ಅನುಗುಣವಾಗಿ ನಿಯಮಾನುಸಾರ ಪರಿಶೀಲಿಸಲಾಗುವುದು. |
| ಇ) | ಈ ಐತಿಹಾಸಿಕ ಕೋಟೆಗಳನ್ನು ಸಂರಕ್ಷಿಸಿ, ರಕ್ಷಣೆ ಮಾಡಿ ಮುಂದಿನ ಪೀಳಿಗೆಗೆ ಅವುಗಳನ್ನು ಕೊಂಡೊಯ್ಯುವ ಕುರಿತು ಹಾಗೂ ಅವುಗಳನ್ನು ಸದೃಢಪಡಿಸಲು ಮತ್ತು ಅಹಿತಕರ ಘಟನೆಗಳು ನಡೆಯದಂತೆ ಸರ್ಕಾರವು ಯಾವ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಂಡಿದೆ; | ಸದರಿ ಐತಿಹಾಸಿಕ ಕೋಟೆಗಳ ಸಂರಕ್ಷಣೆಗೆ ಕರ್ನಾಟಕ ಪ್ರಾಚೀನ ಮತ್ತು ಐತಿಹಾಸಿಕ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳು ಮತ್ತು ಅವಶೇಷಗಳ ಅಧಿನಿಯಮ 1961 ಮತ್ತು 1965ರ ಕಾಯ್ದೆ ಮತ್ತು ನಿಯಮಗಳ ಅಡಿಯಲ್ಲಿ ಕ್ರಮವಹಿಸಲಾಗುವುದು. |
| ಈ) | ಈ ಕೋಟೆಗಳ ಜೀರ್ಣೋದ್ಧಾರ ಮತ್ತು ರಕ್ಷಣೆಗೆ ಎಷ್ಟು ಅನುದಾನವನ್ನು ನಿಗಧಿಪಡಿಸಲಾಗಿದೆ? | 2013-14 ನೇ ಸಾಲಿನ 13ನೇ ಹಣಕಾಸಿನ ಯೋಜನೆಯಡಿ ರಾಯಚೂರು ಜಿಲ್ಲೆಯ ಲಿಂಗಸಗೂರು ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಐತಿಹಾಸಿಕ ಮುದಗಲ್ ಕೋಟೆಯ ಸಂರಕ್ಷಣಾ ಕಾಮಗಾರಿಯನ್ನು ರೂ.50.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲಾಗಿದ್ದು. ಕೋಟೆ ಗೋಡೆಯ ಸಂರಕ್ಷಣಾ ಕಾಮಗಾರಿ ಹಾಗೂ ಕಾಂಕ್ರಿಟ್ ಚೈನ್ಲಿಂಕ್ ಫೆನ್ಸಿಂಗ್ ಕಾಮಗಾರಿಗಳ ಕೆಲಸ ಪೂರ್ಣಗೊಂಡಿದೆ. |

| | | |
|---|---|---|
| | | ಜಲದುರ್ಗ ಐತಿಹಾಸಿಕ ಕೋಟೆಗೆ ಯಾವುದೇ ಅನುದಾನವನ್ನು ನಿಗಧಿಪಡಿಸಿರುವುದಿಲ್ಲ. ಜಲದುರ್ಗ ಐತಿಹಾಸಿಕ ಕೋಟೆಯ ಸಂರಕ್ಷಣೆ/ ಜೀರ್ಣೋದ್ಧಾರಕ್ಕೆ ಪ್ರಸ್ತಾವನೆ ಸ್ವೀಕೃತಗೊಂಡಲ್ಲಿ ವಿಸ್ತೃತ ಯೋಜನಾ ವರದಿಯೊಂದಿಗೆ ಅನುದಾನದ ಲಭ್ಯತೆಗೆ ಅನುಗುಣವಾಗಿ ನಿಯಮಾನುಸಾರ ಪರಿಶೀಲಿಸಲಾಗುವುದು. |

**ಸಂಖ್ಯೆ: ಟಿಓಆರ್ 248 ಟಿಡಿವಿ 2023**

(ಎಚ್.ಕೆ.ಪಾಟೀಲ)
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
ಹಾಗೂ ಪ್ರವಾಸೋದ್ಯಮ ಸಚಿವರು